**ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿಸಿ.ನಂ.133/2017**

**ಸಿ.ಡಬ್ಲ್ಯೂ-14**

**ಪಿ.ಡಬ್ಲ್ಯೂ-6**

| | | |
|---|---|---|
| ಸಾಕ್ಷಿಯ ಹೆಸರು | : | ಸುರೇಶ ಗಡ್ಡಿ |
| ತಂದೆ/ಗಂಡನ ಹೆಸರು | : | ರಂಗಪ್ಪ |
| ವಯಸ್ಸು | : | 39 ವರ್ಷ |
| ಉದ್ಯೋಗ | : | ಸಿ.ಪಿ.ಐ ರಾಜಗುಪ್ತ ವಾರ್ತೆ |
| ವಾಸಸ್ಥಳ | : | ಬೆಂಗಳೂರು ನಗರ |

**ದಿನಾಂಕ: 20-02-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ ರವರಿಂದ:**

ನಾನು ದಿ: 30-10-2014 ರಿಂದ 18-07-2016 ರವರೆಗೆ ಪಿ.ಎಸ್.ಐ ಅಂತಾ ಝಳಕಿ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 20.03.2016 ರಂದುನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ 1 ರವರು ಠಾಣೆಗೆ ಹಾಜರಾಗಿ ಲಿಖಿತ ದೂರನ್ನು ನೀಡಿದ್ದು ಸದರಿ ದೂರಿನ ಸಾರಾಂಶದ ಮೇರೆಗೆ ಠಾಣಾ ಗುನ್ನಾ ನಂ.62/2016 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಪ್ರ.ವ.ವ.ವನ್ನು ಕಳುಹಿಸಿಕೊಟ್ಟಿರುತ್ತೇನೆ. ದಿಃ21.03.2016 ರಂದು ಘಟನಾ ಸ್ಥಳಕ್ಕೆ ಬೇಟಿ ನೀಡಿ ಚಾಸಾ 10 ರವರು ತೋರಿಸಿದ ಘಟನಾ ಸ್ಥಳದ ಪಂಚನಾಮೆಯನ್ನು ಚಾಸಾ 2 ಮತ್ತು 3 ರವರ ಸಮಕ್ಷಮ 10 ರಿಂದ 11.45 ಗಂಟೆಯವರೆಗೆ ಪಂಚನಾಮೆಯನ್ನು ಮಾಡಿ ಅದೇ ವೇಳೆಗೆ ಮು.ಮಾ.1 ಮತ್ತು 2 ನ್ನು ಜಪ್ತಿ ಮಾಡಿ ನಂತರ ನಿ.ಪಿ. 2 ಮತ್ತು 3 ನ್ನು ಅಲ್ಲಿ ತೆಗೆದಿರುತ್ತೇನೆ. ಮಾನ್ಯ ನ್ಯಾಯಾಲಯಕ್ಕೆ ಸ್ವತ್ತಿನ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಅದೇ ದಿನ ಚಾಸಾ 4 ರಿಂದ 12 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿಃ22.03.2016 ರಂದು ಆರೋಪಿತರು ಠಾಣೆಗೆ ಹಾಜರಾಗಿ ಅವರಿಗೆ ದಸ್ತಗಿರಿ ನಿಯಮಗಳನ್ನು ಪಾಲಿಗೆ ದಸ್ತಗಿರಿ ಮಾಡಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ

-2-

ಮಾಡಿರುತ್ತೇನೆ. ಚಾಸಾ 1 ಮತ್ತು 4 ರಿಂದ 6 ರವರ ಗಾಯದ ಪ್ರಮಾಣ ಪತ್ರವನ್ನು ಪೂರೈಸುವಂತೆ ಚಾಸಾ 13 ರವರಿಗೆ ವಿನಂತಿಸಿರುತ್ತೇನೆ. ದಿಃ13.05.2016 ರಂದು ಘಟನಾ ಜಾಗದ ಉತಾರವನ್ನು

ಪೂರೈಸುವಂತೆ ಕಾರ್ಯದರ್ಶಿ ಅಂಜುಟಗಿ ಇವರಿಗೆ ಅರ್ಜಿಯನ್ನು ಮಾಡಿಕೊಂಡಿರುತ್ತೇನೆ. ದಿಃ11.05.2016 ರಂದು ಚಾಸಾ 1 ಮತ್ತು 4 ರಿಂದ 6 ರವರ ಗಾಯದ ಪ್ರಮಾಣ ಪತ್ರಗಳನ್ನು ಸ್ವೀಕರಿಸಿಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿಃ18.05.2016 ರಂದು ಘಟನಾ ಸ್ಥಳದ ಪಹಣಿ ಪತ್ರಿಕೆಯನ್ನು ಸ್ವೀಕರಿಸಿಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಅದೇ ದಿನ ಸಾಕಷ್ಟು ಸಾಕ್ಷ್ಯಾಧಾರಗಳು ಕಂಡುಬಂದ ಕಾರಣ ಆರೋಪಿತರ ವಿರುದ್ಧ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯು ನಿ.ಪಿ. 1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ. 1(ಬಿ) ಎಂದು, ಸಾಕ್ಷಿಯು ನಿ.ಪಿ. 2 ಮತ್ತು 3 ನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನಿ.ಪಿ. 4 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ. 4(ಬಿ) ಎಂದು, ಸಾಕ್ಷಿಯು ಚಾಸಾ 13 ರವರಿಗೆ ನೀಡಿದ ವಿನಂತಿ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ. 5 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 5(ಎ) ಎಂದು, ಸಾಕ್ಷಿಯು 4 ಗಾಯದ ಪ್ರಮಾಣ ಪತ್ರಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ. 6 ರಿಂದ 9 ಎಂದು, ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿ.ಪಿ. 6(ಎ), ನಿ.ಪಿ. 7(ಎ), ನಿ.ಪಿ. 8(ಎ) ಮತ್ತು ನಿ.ಪಿ. 9(ಎ) ಎಂದು, ಸಾಕ್ಷಿಯು ಕಾರ್ಯದರ್ಶಿಗಳಿಗೆ ನೀಡಿದ ಅರ್ಜಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ. 10 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 10(ಎ) ಎಂದು, ಸಾಕ್ಷಿಯು ಪಹಣಿ ಪತ್ರಿಕೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ. 11 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 11(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಮು.ಮಾ.1 ಮತ್ತು 2 ನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು: ಆರೋಪಿತರ ಪರ ಶ್ರೀ.ಎಮ್.ಎಸ್.ಎ.ವಕೀಲರಿಂದಃ**

ಚಾಸಾ 4 ರಿಂದ 12 ರವರ ಹೇಳಿಕೆಗಳನ್ನು ಘಟನಾ ಸ್ಥಳದಲ್ಲಿ ಹಾಗೂ ಆಸ್ಪತ್ರೆಯಲ್ಲಿ ತೆಗೆದುಕೊಂಡಿರುತ್ತೇನೆ. ಚಾಸಾ 4 ರಿಂದ 6 ರವರ ಹೇಳಿಕೆಗಳನ್ನು ದಿಃ21.03.2016 ರಂದು ಆಸ್ಪತ್ರೆಯಲ್ಲಿ ತೆಗೆದುಕೊಂಡಿರುತ್ತೇನೆ. ನಿ.ಪಿ. 6 ರಲ್ಲಿ ಡಿಸ್ಚಾರ್ಜ ಆದ ದಿನಾಂಕ ನಮೂದು ಇರುವುದಿಲ್ಲ ಎಂದರೆ ಸರಿ. ಚಾಸಾ 5 ರವರು ದಿಃ13.03.2016 ರಂದು



ಆಸ್ಪತ್ರೆಗೆ ದಾಖಲಾಗಿದ್ದು ದಿಃ20.03.2016 ರಂದು ಡಿಸ್ಚಾರ್ಜ ಆಗಿರುತ್ತದೆ ಎಂದು ನಿ.ಪಿ. 7 ರಲ್ಲಿ ನಮೂದು ಇರುತ್ತದೆ ಎಂದರೆ ಸರಿ. ದಿಃ21.03.2016 ರಂದು ಚಾಸಾ 5 ರವರು ಆಸ್ಪತ್ರೆಯಲ್ಲಿ ದಾಖಲಾಗಿರುವುದಿಲ್ಲ ಎಂದರೆ ಸರಿ. ಅದೇ ರೀತಿ ನಿ.ಪಿ. 8 ಮತ್ತು 9 ರಲ್ಲಿ ಚಾಸಾ 5 ಮತ್ತು 1 ರವರು ಯಾವಾಗ ದಾಖಲಾಗಿದ್ದರು ಮತ್ತು ಡಿಸ್ಚಾರ್ಜ ಆಗಿರುತ್ತಾರೆ ಎಂದು ನಮೂದು ಇರುವುದಿಲ್ಲ ಎಂದರೆ ಸರಿ. ಪಂಚರುಗಳನ್ನು ನಾನೇ ನಮ್ಮ ಸಿಬ್ಬಂದಿ ಮುಖಾಂತರ ಕರೆಸಿರುತ್ತೇನೆ. ದಿಃ21.03.2016 ರಂದು

ಪಂಚರ ಸಮಕ್ಷಮ ಪಂಚನಾಮೆಯನ್ನು ಮಾಡಿ ಮು.ಮಾ.1 ಮತ್ತು 2 ನ್ನು ಜಪ್ತಿ ಮಾಡಿ ಅದೇ ವೇಳೆಗೆ ನಿ.ಪಿ. 2 ಮತ್ತು 3 ನ್ನು ತೆಗೆದು ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ ಎನ್ನುವುದು ಸುಳ್ಳು ಎಂದರೆ ಸರಿಯಲ್ಲ. ನಾನು ನಿ.ಪಿ. 6 ರಿಂದ 9 ದಾಖಲೆಗಳನ್ನು ಖೊಟ್ಟಿಯಾಗಿ ಸೃಷ್ಠಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಸರಿಯಾಗಿ ತನಿಖೆ ಮಾಡದೇ ಯಾವುದೋ ಒತ್ತಾಯಕ್ಕೆ ಮನಿದು ಒಂದು ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಮು.ಮಾ. 1 ಮತ್ತು 2 ರಂತೆ ಸಾಮಾನ್ಯವಾಗಿ ಎಲ್ಲಾ ಕಡೆ ಸಿಗುತ್ತವೆ ಎಂದರೆ ಸರಿ. ಚಾಸಾ 1 ರವರಿಗೆ ಸಹಾಯ ಮಾಡಲು ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**